## ಹಿರಿಯ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹಿರಿಯೂರು

## ಸಿ.ಸಿ ನಂ.382/2025

| | | |
|---|---|---|
| ಸಾಕ್ಷಿದಾರರ ಹೆಸರು | – ಕರಿಸ್ವಾಮಿ | ಸಿಡಬ್ಲ್ಯೂ-2 |
| ತಂದೆಯ ಹೆಸರು | – ಕರಿಯಪ್ಪ | ಪಿಡಬ್ಲ್ಯೂ-2 |
| ವಯಸ್ಸು | – 56 ವರ್ಷ | |
| ಉದ್ಯೋಗ | – ವ್ಯವಸಾಯ | |
| ವಾಸ | – ಉಪ್ಪಳಗೆರೆ ಗ್ರಾಮ | |

**ದಿನಾಂಕಃ 06.04.2026 ರಂದು ಸಾಕ್ಷಿಯನ್ನು ಕರೆಸಲಾಯಿತು ಮತ್ತು ಪ್ರಮಾಣ ವಚನ ಬೋಧಿಸಲಾಯಿತು.**

### ಸಾಕ್ಷಿದಾರರ ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ

ಚಾಸಾ.1 ನನ್ನ ಹೆಂಡತಿ , ಚಾಸಾ.3 ನನ್ನ ಮಗ . ನನಗೆ ಚಾಸಾ.4 ಮತ್ತು 5 ಗೊತ್ತು. ಆರೋಪಿತರು ನನಗೆ ಗೊತ್ತು. ಆರೋಪಿತರು ನಮಗೆ ಜಗಳ ಮಾಡಿಲ್ಲ, ಹೊಡಿ ಬಡಿ ಮಾಡಿಲ್ಲ, ಕೈಕಲುಗಳಿಂದ ಹೊಡೆದಿಲ್ಲ, ಕಲ್ಲುಗಳಿಂದ ಹೊಡೆದಿಲ್ಲ , ಪ್ರಾಣ ಬೆದರಿಕೆ ಹಾಕಿಲ್ಲ, ನಾನು ಪೊಲೀಸರಿಗೆ ಹೇಳಿಕೆ ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಬೇಕೆಂದು ಮತ್ತು ಪಾಟೀ ಸವಾಲು ಮಾಡಲು ಅನುಮತಿ ನೀಡಬೇಕೆಂದು ಸ ಸ ಅಭಿಯೋಜಕರು ಕೋರಿದ್ದರಿಂದ ಅನುಮತಿ ನೀಡಲಾಯಿತು)

### ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದಃ

ದಿಃ 17.01.2025 ರಂದು ಸುಮಾರು 3.20 ರ ಸಮಯದಲ್ಲಿ ಹಿರಿಯೂರು ತಾ. ಉಪ್ಪಳಗೆರೆ ಗ್ರಾಮದ ಕೃಷ್ಣಪ್ಪನವರ ಮನೆಯ ಮುಂದಿನ ರಸ್ತೆಯಲ್ಲಿ 1 ನೇ ಆರೋಪಿ ಚಾಸಾ.3 ರವರಿಗೆ ಗಲಾಟೆ ಮಾಡಿ ಹೊಡೆಯುತ್ತಿದ್ದಾಗ ನಾನು ಮತ್ತು ಚಾಸಾ.1 ರವರು 1 ನೇ ಆರೋಪಿಗೆ ಏಕೆ ಹೊಡೆಯುತ್ತಿಯಾ ಎಂದು ಕೇಳಿದ್ದಕ್ಕೆ 1 ನೇ ಆರೋಪಿ ನನಗೆ ಮತ್ತು ಚಾಸಾ.1, 3 ವರಿಗೆ ಸೂಳೆ ಮಕ್ಕಳಾ ಬೋಳಿ ಮಕ್ಕಳಾ ಎಂದು ಅವಾಚ್ಯ ಶಬ್ದಗಳಿಂದ ಬೈದಾಡಿ , 2 ಮತ್ತು 3 ನೇ

ಆರೋಪಿತರು ನನಗೆ ಕೈಕಾಲುಗಳಿಂದ ಮೈಕೈಗೆ ಹೊಡೆದು 1, 3, 4 ನೇ ಆರೋಪಿತರು ಚಾಸಾ.1 ರವರು ಹಾಕಿಕೊಂಡ ನೈಟಿ ಹಿಡಿದು ಎಳೆದಾಡಿ ಕೈಕಾಲುಗಳಿಂದ ಮೈಕೈಗೆ ಹೊಡೆದು ಆರೋಪಿ 1, 2, 3 ರವರು ಚಾಸಾ.3 ರವರಿಗೆ ಕಲ್ಲಿನಿಂದ ಎದೆಗೆ , ಮೈಗೆ , ಬೆನ್ನಿಗೆ ಹೊಡೆದಿದ್ದು ಸಾಮಾನ್ಯ ಸ್ವರೂಪದ ಗಾಯ ಮಾಡಿದ್ದಲ್ಲದೇ ಈ ಬಾರಿ ಬದುಕಿದ್ದೀರಿ ಇನ್ನೊಮ್ಮೆ ಸಿಕ್ಕರೆ ಬಿಡುವುದಿಲ್ಲ ಎಂದು ಜೀವ ಬೆದರಿಕೆ ಹಾಕಿದ್ದಾರೆ ಎಂದರೆ ಸರಿಯಲ್ಲ. ನಾನು ಈ ರೀತಿಯಾಗಿ ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆ ಭಾಗವನ್ನು ಓದಿ ಹೇಳಲಾಗಿ ಸಾಕ್ಷಿ ನಿರಾಕರಿಸಿದ್ದರಿಂದ ಹೇಳಿಕೆ ಭಾಗವನ್ನು ನಿಪಿ-4 ಎಂದು ಗುರುತಿಸಲಾಯಿತು. ಈಗ ನಾವು ಮತ್ತು ಆರೋಪಿತರು ರಾಜೀ ಮಾಡಿಕೊಂಡಿದ್ದೇವೆ ಎಂದರೆ ಸರಿ ಆ ಕಾರಣದಿಂದ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ಶ್ರೀ ಡಿ ಎಲ್ ಎಂ ವಕೀಲರಿಂದ-ಏನೂ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು )

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ ಎಂ ಎಫ್ ಸಿ , ಹಿರಿಯೂರು